**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ**

**ಆಳಂದ**

ಸಿ.ಸಿ. ನಂಬರ 4512/2021 ಸಿ.ಡಬ್ಲೂ.**5** ಪಿ.ಡಬ್ಲೂ.**7**

| | |
|---|---|
| ಹೆಸರು | ಸಿದ್ದರಾಮ |
| ತಂದೆ/ಗಂಡ | ಚಂದ್ರಪ್ಪಾ |
| ವಯಸ್ಸು | 45 ವರ್ಷ |
| ಉದ್ಯೋಗ | ಗುತ್ತಿಗೆದಾರ |
| ವಾಸಸ್ಥಳ | ಆಳಂದ |

ದಿನಾಂಕ 02-04-2026
ಸತ್ಯ ಪ್ರತಿಜ್ಞೆಯ ಮೇರೆಗೆ

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ವಕೀಲರಿಂದ:**

ಆರೋಪಿತರ ಪರಿಚಯ ಇರುವುದಿಲ್ಲ. ಚಾಸಾ-1 ರಿಂದ 4, 6 ರಿಂದ 16 ರವರ ಪರಿಚಯ ಇರುವುದಿಲ್ಲ ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನನಗೆ ಪೋಲಿಸರು ಒಂದು ದಾಖಲೆಯ ಮೇಲೆ ಸಹಿ ಮಾಡು ಅಂತಾ ಹೇಳಿದ ಕಾರಣ ನಾನು ಸಹಿಯನ್ನು ಮಾಡಿರುತ್ತೇನೆ. ಸಾಕ್ಷಿಯು ನಿಪಿ. 1 ರಲ್ಲಿ ಇರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 1(ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು. )**

ಪಾಟೀ ಸವಾಲುಃ ಮಾನ್ಯ ಸ ಸ ಅ ವಕೀಲರಿಂದ:

ದಿಃ 29-01-2021 ರಂದು 06.30 ರಿಂದ 8.00 ಗಂಟೆಯವರೆಗೆ, ನನ್ನ ಹಾಗೂ ಚಾಸ-5 ರವರ ಸಮಕ್ಷಮ ಜಪ್ತಿ ಪಂಚನಾಮೆಯನ್ನು ಮಾಡಿ ಸ್ಥಳದಿಂದ ನಮ್ಮ ಸಮಕ್ಷಮ ಆಭರಣಗಳನ್ನು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ. 1 ರಲ್ಲಿ ಇರುವ ಮಾಹಿತಿ ಗೊತ್ತಿದ್ದರೂ ಸಹಿತ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರಃ ವಕೀಲರಿಂದ:

ಪಾಟೀ ಸವಾಲು ಇಲ್ಲ.

ಮರು ವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಕೇ.ಸ.ಇ.ಅದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ.ಎಫ್.ಸಿ ಆಳಂದ